**Akashvani : Bangalore**
**National Bulletin In Kannada**
**19.07.2024 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**19.07.2024 19.35 hrs**

**<><*<><>*><>**

<u>ಮುಖ್ಯಾಂಶಗಳು</u>

**೧. ಇದೇ ೨೨ರಿಂದ ಸಂಸತ್ತಿನ ಮುಂಗಾರು ಅಧಿವೇಶನ ಪ್ರಾರಂಭ; ೨೩ರಂದು ಕೇಂದ್ರ ಬಜೆಟ್ ಮಂಡನೆ**

**೨. ಮೈಕ್ರೋಸಾಫ್ಟ್ ಕಾರ್ಯನಿರ್ವಹಣೆ ಸ್ಥಗಿತ; ವಿಮಾನಯಾನ, ಬ್ಯಾಂಕಿಂಗ್ ಸೇರಿ ವಿವಿಧ ವಲಯಗಳಲ್ಲಿ ತಾಂತ್ರಿಕ ತೊಂದರೆ**

**೩. ೨೦೩೦ರ ವೇಳೆಗೆ ದೇಶದ ಎಲೆಕ್ಟ್ರಾನಿಕ್ಸ್ ಉತ್ಪಾದನಾ ಮೌಲ್ಯ ೫೦೦ ಶತಕೋಟಿ ಅಮೆರಿಕನ್ ಡಾಲರ್ ಸಾಧಿಸುವ ಗುರಿ; ನೀತಿ ಆಯೋಗ**

**೪. ಏಷ್ಯಾ ಕಪ್ ಟಿ-೨೦ ಮಹಿಳಾ ಕ್ರಿಕೆಟ್: ಭಾರತ-ಪಾಕಿಸ್ತಾನ ಮುಖಾಮುಖಿ**

**<><*<><>*><>**

ಸಂಸತ್ತಿನ ಮುಂಗಾರು ಅಧಿವೇಶನ ಮುಂದಿನ ವಾರ ಆರಂಭವಾಗಲಿದ್ದು, ವಿಪತ್ತು ನಿರ್ವಹಣಾ ಕಾನೂನಿಗೆ ತಿದ್ದುಪಡಿ ತರುವುದು ಸೇರಿದಂತೆ ಒಟ್ಟು ಆರು ಹೊಸ ಮಸೂದೆಗಳನ್ನು ಈ ಅಧಿವೇಶನದಲ್ಲಿ ಮಂಡಿಸಲು ಸರ್ಕಾರ ನಿರ್ಧರಿಸಿದೆ. ಹಣಕಾಸು ಮಸೂದೆಯ ಹೊರತಾಗಿ, ನಾಗರಿಕ ವಿಮಾನಯಾನ ಕ್ಷೇತ್ರದಲ್ಲಿ ಸುಲಭವಾಗಿ ವ್ಯಾಪಾರ ಮಾಡಲು ಅನುಕೂಲ ಮಾಡಿಕೊಡುವ ನಿಬಂಧನೆಗಳನ್ನು ಒದಗಿಸಲು ೧೯೩೪ರ ಏರ್‌ಕ್ರಾಫ್ಟ್ ಕಾಯ್ದೆಯನ್ನು ಬದಲಿಸಲಿರುವ ಸರ್ಕಾರ, ಭಾರತೀಯ ವಾಯುಯಾನ್ ವಿಧೇಯಕ್ ೨೦೨೪ನ್ನು ಜಾರಿಗೆ ತರಲಿದೆ. ಸಂಸತ್ತಿನ ಮುಂಗಾರು ಅಧಿವೇಶನ ಇದೇ ೨೨ರಿಂದ ಪ್ರಾರಂಭವಾಗಿ ಆಗಸ್ಟ್ ೧೨ ರವರೆಗೆ

ಮುಂದುವರೆಯಲಿದೆ. ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಇದೇ ೨೩ ರಂದು ಕೇಂದ್ರ ಬಜೆಟ್ ಮಂಡಿಸಲಿದ್ದಾರೆ ಎಂದು ಹೇಳಿದ್ದಾರೆ. ಈ ನಡುವೆ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು ಸಂಸತ್ತಿನ ಕಾರ್ಯಸೂಚಿಯನ್ನು ನಿರ್ಧರಿಸುವ ವ್ಯವಹಾರ ಸಲಹಾ ಸಮಿತಿ ರಚಿಸಿದ್ದು, ಸ್ವತಃ ಅವರೇ ಈ ಸಮಿತಿಯ ಅಧ್ಯಕ್ಷರಾಗಿದ್ದಾರೆ. ಉಳಿದಂತೆ, ಟಿಎಂಸಿಯ ಸುದೀಪ್ ಬಂಡ್ಯೋಪಾಧ್ಯಾಯ, ಬಿಜೆಪಿಯ ಪಿ.ಪಿ. ಚೌಧರಿ, ನಿಶಿಕಾಂತ್ ದುಬೇ, ಸಂಜಯ್ ಜೈಸ್ವಾಲ್, ಬೈಜಯಂತ್ ಪಾಂಡಾ, ಅನುರಾಗ್ ಠಾಕೂರ್, ಭಾತ್ರ್ಯಹರಿ ಮಹತಾಬ್, ಟಿಡಿಪಿಯ ಲವು ಶ್ರೀಕೃಷ್ಣ ದೇವರಾಯಲು, ಕಾಂಗ್ರೆಸ್‌ನ ಗೌರವ್ ಗೊಗೊಯಿ, ಕೊಡಿಕುನಿಲ್ ಸುರೇಶ್, ಜೆಡಿಯುನ ದಿಲೇಶ್ವರ್ ಕಮೈತ್, ಡಿಎಂಕೆಯ ದಯಾನಿಧಿ ಮಾರನ್, ಶಿವಸೇನೆಯ ಅರವಿಂದ್ ಸಾವಂತ್ ಹಾಗೂ ಸಮಾಜವಾದಿ ಪಕ್ಷದ ಲಾಲ್ಜಿತ್ ವರ್ಮಾ ಸದಸ್ಯರಾಗಿದ್ದಾರೆ.

<><*<><>*><>

ಜಾಗತಿಕವಾಗಿ ಇಂದು ಮೈಕ್ರೋಸಾಫ್ಟ್ ಕಾರ್ಯನಿರ್ವಹಣೆ ಸ್ಥಗಿತಗೊಂಡ ಪರಿಣಾಮ, ವಿಮಾನಯಾನ, ಷೇರು ಮಾರುಕಟ್ಟೆ, ಬ್ಯಾಂಕಿಂಗ್ ಕಾರ್ಯಾಚರಣೆಗಳು ಸೇರಿದಂತೆ ವಿವಿಧ ವಲಯಗಳಲ್ಲಿ ವ್ಯಾಪಕ ತಾಂತ್ರಿಕ ತೊಂದರೆ ಉಂಟಾಯಿತು.ಮೈಕ್ರೋಸಾಫ್ಟ್ ಸ್ಥಗಿತದಿಂದಾಗಿ ವಿಮಾನಯಾನಕ್ಕೆ ದೊಡ್ಡ ತೊಂದರೆಯಾಗಿದ್ದು, ಭಾರತದ ಆಕಾಶ್, ಇಂಡಿಗೋ, ಏರ್ ಇಂಡಿಯಾ, ವಿಸ್ತಾರಾ ಮತ್ತು ಸ್ಪೈಸ್‌ಜೆಟ್‌ನಂತಹ ಪ್ರಮುಖ ವಿಮಾನಯಾನ ಸಂಸ್ಥೆಗಳು  ಸಮಸ್ಯೆಗೆ ಸಿಲುಕಿವೆ. ದೆಹಲಿ ವಿಮಾನ ನಿಲ್ದಾಣದಲ್ಲೂ ಈ ಸಮಸ್ಯೆ ಎದುರಾಗಿದ್ದು, ಕೆಲವು ಸೇವೆಗಳು ತಾತ್ಕಾಲಿಕವಾಗಿ ಸ್ಥಗಿತಗೊಂಡಿವೆ. ಜಾಗತಿಕವಾಗಿ ಲಕ್ಷಾಂತರ ವಿಂಡೋಸ್ ಬಳಕೆದಾರರು ಬ್ಲೂ ಸ್ಕ್ರೀನ್ ಸಮಸ್ಯೆ ಎದುರಿಸುತ್ತಿದ್ದಾರೆ. ಕಂಪ್ಯೂಟರ್‌ಗಳು ಏಕಾಏಕಿ ಕಾರ್ಯ ನಿರ್ವಹಿಸುವುದನ್ನು ನಿಲ್ಲಿಸಿದ್ದು,  ಬಳಕೆದಾರರ ಡೇಟಾಗಳ ಮೇಲೆ ಪರಿಣಾಮ ಬೀರುವ ಆತಂಕ ಎದುರಾಗಿದೆ. ಈ ಕುರಿತು ಸ್ಪಷ್ಟನೆ ನೀಡಿರುವ ಮೈಕ್ರೋಸಾಫ್ಟ್ ಸಂಸ್ಥೆ, ಸಾಫ್ಟ್‌ವೇರ್

ಅಪ್‌ಡೇಟ್ ಮಾಡಿದ್ದರಿಂದ ಮೈಕ್ರೊಸಾಫ್ಟ್ ಕ್ಲೌಡ್‌ನಲ್ಲಿ ಈ ಸಮಸ್ಯೆ ಉಂಟಾಗಿದೆ. ಶೀಘ್ರವೇ ಸಮಸ್ಯೆಯನ್ನು ಬಗೆಹರಿಸುವುದಾಗಿ ತಿಳಿಸಿದೆ.

<><*<><>*><>

ಭಾರತವು ೨೦೩೦ರ ವೇಳೆಗೆ ಎಲೆಕ್ಟ್ರಾನಿಕ್ಸ್ ಉತ್ಪಾದನೆಯ ಮೌಲ್ಯವನ್ನು ೫೦೦ ಶತಕೋಟಿ ಅಮೆರಿಕನ್ ಡಾಲರ್ ಸಾಧಿಸುವ ಗುರಿಯನ್ನು ಹೊಂದಿದೆ. ಈ ಮಹತ್ವಾಕಾಂಕ್ಷೆಯ ಗುರಿಯು ಸಿದ್ಧಪಡಿಸಿದ ಸರಕುಗಳ ಉತ್ಪಾದನೆಯಿಂದ ೩೫೦ ಶತಕೋಟಿ ಡಾಲರ್ ಹಾಗೂ ಘಟಕಗಳಿಂದ ೧೫೦ ಶತಕೋಟಿ ಡಾಲರ್‌ಗಳನ್ನು ಒಳಗೊಂಡಿರುತ್ತದೆ. ನೀತಿ ಆಯೋಗದ ಉಪಾಧ್ಯಕ್ಷ ಸುಮನ್ ಬೇರಿ ಅವರು ದೆಹಲಿಯಲ್ಲಿ 'ಎಲೆಕ್ಟ್ರಾನಿಕ್ಸ್ ಮತ್ತು ಜಾಗತಿಕ ಮೌಲ್ಯ ಸರಪಣಿಯಲ್ಲಿ ಭಾರತೀಯ ಪಾಲ್ಗೊಳ್ಳುವಿಕೆ' ಕುರಿತ ವರದಿ ಬಿಡುಗಡೆ ಮಾಡಿದರು. ಭಾರತದ ಎಲೆಕ್ಟ್ರಾನಿಕ್ಸ್ ವಲಯವನ್ನು ವ್ಯಾಪಕವಾಗಿ ವಿಸ್ತರಿಸಲು ಉತ್ತೇಜಿಸಲಾಗುತ್ತದೆ. ಭಾರತ ಜಾಗತಿಕವಾಗಿ ಎಲೆಕ್ಟ್ರಾನಿಕ್ಸ್‌ನಲ್ಲಿ ಉತ್ಪಾದನಾ ಕೇಂದ್ರವಾಗಿ ಹೊರಹೊಮ್ಮುತ್ತಿದೆ ಎಂದು ಸುಮನ್ ಬೇರಿ ಹೇಳಿದರು.

<><*<><>*><>

ಖೇಲೋ ಇಂಡಿಯಾ ಉದಯೋನ್ಮುಖ ಪ್ರತಿಭೆಗಳ ಗುರುತಿಸುವಿಕೆ-ಕೀರ್ತಿ ಕಾರ್ಯಕ್ರಮವನ್ನು ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ.ಮನ್ಸುಖ್ ಮಾಂಡವಿಯಾ ದೆಹಲಿಯಲ್ಲಿಂದು ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ಅತ್ಯಂತ ತಳ ಮಟ್ಟದ ಕ್ರೀಡಾ ಪ್ರತಿಭೆಗಳಿಗೂ ಅವಕಾಶ ನೀಡುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಈಗಾಗಲೇ ಹಲವು ಕಾರ್ಯಕ್ರಮಗಳನ್ನು ರೂಪಿಸಿದ್ದಾರೆ. ಮೊದಲ ಹಂತದಲ್ಲಿ ಒಂದು ಲಕ್ಷ ಕ್ರೀಡಾ ಪ್ರತಿಭೆಗಳನ್ನು ಗುರುತಿಸಲಾಗುತ್ತಿದೆ. ಭಾರತೀಯ ಕ್ರೀಡೆಯನ್ನು ಉಜ್ವಲ ಭವಿಷ್ಯದತ್ತ ಕೊಂಡೊಯ್ಯುವ ಅರ್ಹ ವಿದ್ಯಾರ್ಥಿಗಳನ್ನು ಗುರುತಿಸಲು ಇಂಥ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ. ಬಿಲ್ಲುಗಾರಿಕೆ, ಅಥ್ಲೆಟಿಕ್ಸ್, ಬ್ಯಾಡ್ಮಿಂಟನ್, ಬಾಕ್ಸಿಂಗ್, ಫುಟ್‌ಬಾಲ್,

ಹಾಕಿ, ಕಬಡ್ಡಿ, ಖೋ-ಖೋ, ವಾಲಿಬಾಲ್, ವೇಟ್‌ಲಿಫ್ಟಿಂಗ್ ಮತ್ತು ಕುಸ್ತಿ ಕ್ರೀಡೆಗಳಲ್ಲಿ ಹೆಚ್ಚಿನ ಉತ್ತೇಜನ ನೀಡಲು ವಿವಿಧೆಡೆಗಳಲ್ಲಿ ತರಬೇತಿಗಳನ್ನು ಆಯೋಜಿಸಲಾಗುತ್ತಿದೆ. ಈ ಮೂಲಕ ಗ್ರಾಮೀಣ ಪ್ರತಿಭೆಗಳೂ ಹೊರಹೊಮ್ಮಲು ಸಾಧ್ಯವಾಗಿದೆ. ಕ್ರೀಡಾ ಕ್ಷೇತ್ರದಲ್ಲಿಯೂ ಅಭಿವೃದ್ಧಿಯ ಪಥದಲ್ಲಿ ಭಾರತ ದಾಪುಗಾಲು ಇಟ್ಟಿದ್ದು, ಈ ಕನಸು ನನಸಾಗುವ ರಾಷ್ಟ್ರ ನಿರ್ಮಾಣಕ್ಕೆ, ಕ್ರೀಡಾಪಟುಗಳು ಸಜ್ಜಾಗಬೇಕಿದೆ ಎಂದು ಡಾ.ಮನ್ಸುಖ್ ಮಾಂಡವಿಯಾ ಹೇಳಿದ್ದಾರೆ.

**<><*<><>*><>**

ಉತ್ತರ ಪ್ರದೇಶದ ಲಖನೌದಲ್ಲಿ ನೈಸರ್ಗಿಕ ಕೃಷಿ ಆಧರಿತ "ಭಾರತೀಯ ನೈಸರ್ಗಿಕ ಕೃಷಿ ವಿಧಾನ" ಕಾರ್ಯಕ್ರಮವನ್ನು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ತಲತಲಾಂತರಗಳಿಂದ ಭಾರತದಲ್ಲಿ ರೂಢಿಯಲ್ಲಿರುವ ನೈಸರ್ಗಿಕ ಕೃಷಿ ಇಂದು ಹಲವು ಕಡೆಗಳಲ್ಲಿ ಕಣ್ಮರೆಯಾಗುತ್ತಿದೆ. ರಾಸಾಯನಿಕ ಕೃಷಿ ರಾರಾಜಿಸುತ್ತಿದ್ದು, ಇದು ಅತ್ಯಂತ ದುರ್ದೈವದ ಸಂಗತಿ ಎಂದು ಹೇಳಿದರು. ಜಮೀನುಗಳಿಗೆ ರಾಸಾಯನಿಕ ಸಿಂಪಡಣೆ ಮಾಡಿದರೆ ಮಾತ್ರ ಅಧಿಕ ಇಳುವರಿ ಬರುತ್ತದೆ ಎನ್ನುವ ಯೋಚನೆ ಸರಿಯಲ್ಲ. ರಾಸಾಯನಿಕ ಸಿಂಪಡಣೆಯಿಂದ ವಿಷಯುಕ್ತ ಆಹಾರಗಳ ಸೇವನೆಯಿಂದಲೇ ಇಂದು ಅನಾರೋಗ್ಯ ಸಮಸ್ಯೆ ತೀವ್ರವಾಗಿದೆ. ಭೂಮಿ ತಾಯಿಯ ರಕ್ಷಣೆಯಾದರೆ ಮಾತ್ರ ಜನರ ರಕ್ಷಣೆ ಎನ್ನುವುದನ್ನು ಅರಿಯಬೇಕು. ಭೂಮಿಗೆ ರಾಸಾಯನಿಕ ಸಿಂಪಡಣೆ ಮಾಡಿ ಜನರು ಇನ್ನಿಲ್ಲದ ಸಂಕಷ್ಟಗಳನ್ನು ಅನುಭವಿಸುವುದನ್ನು ದೂರ ಮಾಡಬೇಕಿದೆ ಎಂದು ಶಿವರಾಜ್ ಸಿಂಗ್ ಚೌಹಾಣ್ ಹೇಳಿದರು.

**<><*<><>*><>**

ರಕ್ಷಣಾ ಮತ್ತು ಯುದ್ಧ ತಂತ್ರಜ್ಞಾನದ ವಿಕಾಸದಿಂದಾಗಿ ವಾಯುಪಡೆಯ ಜವಾಬ್ದಾರಿಗಳು ಹೆಚ್ಚಿವೆ ಎಂದು ಭಾರತೀಯ ವಾಯುಪಡೆಯ ಉಪ ಮುಖ್ಯಸ್ಥ ಏರ್ ಮಾರ್ಷಲ್ ಅಮರ್ ಪ್ರೀತ್ ಸಿಂಗ್ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ

ವಾಯು ಮತ್ತು ಮಿಸ್ಸೈಲ್ ಡಿಫೆನ್ಸ್ ಇಂಡಿಯಾ ಸೆಮಿನಾರ್ ಮತ್ತು ಎಕ್ಸಿಬಿಷನ್ ೨೦೨೪ ರ ಉದ್ಘಾಟನಾ ಭಾಷಣ ಮಾಡಿದ ಏರ್ ಮಾರ್ಷಲ್ ಅಮರ್ ಪ್ರೀತ್ ಸಿಂಗ್, ಪ್ರತಿಯೊಂದು ಪ್ರಮುಖ ತಾಂತ್ರಿಕ ಬೆಳವಣಿಗೆಯನ್ನು ವಾಯುಪಡೆಯು ಅಳವಡಿಸಿಕೊಳ್ಳುವ ಅಗತ್ಯವಿದೆ ಎಂದರು. ಸಂವಹನ ಮತ್ತು ಡೇಟಾವು ನಿರ್ಣಾಯಕ ಪಾತ್ರವನ್ನು ವಹಿಸುತ್ತದೆ. ರಕ್ಷಣಾ ಪಡೆಗಳು ದೃಢವಾದ ಮತ್ತು ಬಹು ಪದರದ ರಕ್ಷಣಾ ವ್ಯವಸ್ಥೆಯನ್ನು ಹೊಂದಿರಬೇಕು. ಈ ಕ್ಷೇತ್ರದಲ್ಲಿ ಭಾರತವು ಸ್ವಾವಲಂಬಿಯಾಗಬೇಕಾದ ಅಗತ್ಯವನ್ನು ಅವರು ಒತ್ತಿ ಹೇಳಿದರು.

**<><*<><>*><>**

ಐಎಎಸ್ ಪ್ರೊಬೇಷನರಿ ಅಧಿಕಾರಿ ಡಾ.ಪೂಜಾ ಖೇಡ್ಕರ್ ವಿರುದ್ಧ ಕೇಂದ್ರ ಲೋಕಸೇವಾ ಆಯೋಗವು ಪೊಲೀಸರಲ್ಲಿ ಪ್ರಕರಣ ದಾಖಲಿಸಿದೆ. ಜತೆಗೆ ಅವರಿಗೆ ಆಯೋಗ ಶೋಕಾಸ್ ನೋಟಿಸ್ ಜಾರಿಗೊಳಿಸಿದೆ. ಪೂಜಾ ಖೇಡ್ಕರ್ ಅವರು ತಮಗೆ ಅನುಮತಿಸಿದ್ದ ಮಿತಿಯನ್ನು ಮೀರಿ ಹಲವು ಪ್ರಯತ್ನಗಳನ್ನು ಪಡೆದಿರುವುದು ತನಿಖೆಯಿಂದ ತಿಳಿದುಬಂದಿದೆ. ಹೀಗಾಗಿ ಇವರ ನೇಮಕಾತಿಯನ್ನೇ ರದ್ದುಗೊಳಿಸುವಂತ ಗಂಭೀರ ಕ್ರಮ ಕೈಗೊಳ್ಳಲು ಕಾರಣ ಕೇಳಿ ನೋಟಿಸ್ ಜಾರಿ ಮಾಡಲಾಗಿದೆ ಎಂದು ಆಯೋಗ ಹೇಳಿದೆ. ಕೇಂದ್ರ ಲೋಕಸೇವಾ ಆಯೋಗದ ಪರೀಕ್ಷೆಯಲ್ಲಿ ತಮಗೆ ಅನುಮತಿಸಿದ್ದ ಮಿತಿಗೂ ಮೀರಿದ ಪ್ರಯತ್ನ ಪಡೆಯಲು ಪೂಜಾ ಅವರು ನಕಲಿ ದಾಖಲೆಗಳನ್ನು ಸಲ್ಲಿಸಿರುವುದು ತನಿಖೆಯಿಂದ ತಿಳಿದುಬಂದಿದೆ. ಇದರಲ್ಲಿ ಅವರ ಹೆಸರು ಬದಲಾವಣೆ, ತಂದೆ ಹಾಗೂ ತಾಯಿಯ ಹೆಸರು ಬದಲಿಸಿರುವುದು, ಭಾವಚಿತ್ರ ಬದಲಾವಣೆ ಹಾಗೂ ಸಹಿ, ಇಮೇಲ್ ವಿಳಾಸ, ಮೊಬೈಲ್ ಮತ್ತು ಮನೆಯ ವಿಳಾಸವನ್ನು ಬದಲಿಸುವ ಮೂಲಕ ತಮ್ಮ ಗುರುತು ಮರೆಮಾಚಿ ಆಯೋಗವನ್ನು ವಂಚಿಸಿದ್ದಾರೆ ಎಂದು ಆಯೋಗ ತಿಳಿಸಿದೆ. ಐಎಎಸ್ ಪ್ರೊಬೇಷನರಿ ಅಧಿಕಾರಿ ಡಾ.ಪೂಜಾ ಖೇಡ್ಕರ್ ಅವರು ಸಲ್ಲಿಸಿದ ವೈದ್ಯಕೀಯ ಪ್ರಮಾಣಪತ್ರಗಳ ಸತ್ಯಾಸತ್ಯತೆ ಬಗ್ಗೆ ಪುಣೆ ಪೊಲೀಸರು ತನಿಖೆ ನಡೆಸಿದ್ದಾರೆ.

<><*<><>*><>

ಮಹಾರಾಷ್ಟ್ರದ ಜಲ್ನಾ ಜಿಲ್ಲೆಯಲ್ಲಿ ನಿನ್ನೆ ರಾತ್ರಿ ಸಂಭವಿಸಿದ ಅಪಘಾತದಲ್ಲಿ ಕನಿಷ್ಠ ಏಳು ಯಾತ್ರಾರ್ಥಿಗಳು ಸಾವನ್ನಪ್ಪಿದ್ದು, ಆರು ಮಂದಿ ಗಾಯಗೊಂಡಿದ್ದಾರೆ. ಸುಮಾರು ೧೪ ಮಂದಿ ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಜೀಪ್, ನಿಯಂತ್ರಣ ತಪ್ಪಿ ಜಾಲ್ನಾ-ರಾಜೂರ್ ಹೆದ್ದಾರಿಯಲ್ಲಿ ತೆರೆದ ಬಾವಿಗೆ ಪಲ್ಟಿಯಾಗಿದೆ. ಯಾತ್ರಾರ್ಥಿಗಳು ವಾರ್ಷಿಕ ತೀರ್ಥಯಾತ್ರೆ ಆಷಾಢ ವಾರಿಯನ್ನು ಮುಗಿಸಿ ಪಂಢರಾಪುರದಿಂದ ಹಿಂತಿರುಗುತ್ತಿದ್ದರು. ಚಿಕಿತ್ಸೆಗಾಗಿ ಗಾಯಾಳುಗಳನ್ನು ಆಸ್ಪತ್ರೆಗೆ ರವಾನಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಅಪಘಾತದಲ್ಲಿ ಮೃತಪಟ್ಟವರ ಕುಟುಂಬಕ್ಕೆ ತಲಾ ೫ ಲಕ್ಷ ರೂಪಾಯಿ ಹಾಗೂ ಗಾಯಗೊಂಡವರ ಚಿಕಿತ್ಸಾ ವೆಚ್ಚವನ್ನು ಸರ್ಕಾರವೇ ಭರಿಸಲಿದೆ ಎಂದು ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ ಘೋಷಿಸಿದ್ದಾರೆ.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೭೫೫ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೮೦ ಸಾವಿರದ ೫೮೮ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೨೭೫ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೨೪ ಸಾವಿರದ ೫೨೫ ಅಂಕಗಳು ದಾಖಲಾಗಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೩ ರೂಪಾಯಿ ೬೬ ಪೈಸೆಯಷ್ಟಾಗಿದೆ.

<><*<><>*><>

ಶ್ರೀಲಂಕಾದಲ್ಲಿ ಇಂದಿನಿಂದ ಮಹಿಳೆಯರ ಏಷ್ಯಾ ಕಪ್ ಟಿ-೨೦ ಕ್ರಿಕೆಟ್ ಪಂದ್ಯಾವಳಿ ಆರಂಭವಾಗಿದೆ. ಭಾರತ ತಂಡದ ವನಿತೆಯರು, ದಾಂಬುಲಾದಲ್ಲಿ ಇಂದು ನಡೆಯುತ್ತಿರುವ ತಮ್ಮ ಮೊದಲ ಪಂದ್ಯದಲ್ಲಿ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನ ತಂಡದೊಂದಿಗೆ ಮುಖಾಮುಖಿಯಾಗಿದ್ದಾರೆ. ಟಾಸ್ ಗೆದ್ದ ಪಾಕಿಸ್ತಾನ, ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದೆ. ಇತ್ತೀಚಿನ ವರದಿ ಬಂದಾಗ, ಪಾಕಿಸ್ತಾನ ತಂಡ ೮

ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೪೧ ರನ್ ಮಾಡಿ ಆಡುತ್ತಿದೆ. ಶ್ರೀಲಂಕಾದ ಆತಿಥ್ಯದಲ್ಲಿ ನಡೆಯಲಿರುವ ೯ನೇ ಆವೃತ್ತಿಯ ಈ ಪಂದ್ಯಾವಳಿಯಲ್ಲಿ ಒಟ್ಟು ಎಂಟು ತಂಡಗಳು ಭಾಗವಹಿಸಿದ್ದು, ತಲಾ ೪ ತಂಡಗಳಂತೆ ಎರಡು ಗುಂಪುಗಳಲ್ಲಿ ವಿಭಜಿಸಲಾಗಿದೆ. ಹರ್ಮನ್‌ಪ್ರೀತ್ ಕೌರ್ ನಾಯಕತ್ವದ ಭಾರತ ತಂಡ, ಎ” ಗುಂಪಿನಲ್ಲಿ ಪಾಕಿಸ್ತಾನ, ನೇಪಾಳ ಮತ್ತು ಯುಎಇ ತಂಡಗಳ ಜತೆ ಸ್ಥಾನ ಹೊಂದಿದೆ. ಇನ್ನು ಬಿ” ಗುಂಪಿನಲ್ಲಿ ಆತಿಥೇಯ ಶ್ರೀಲಂಕಾ, ಬಾಂಗ್ಲಾದೇಶ, ಥಾಯ್ಲೆಂಡ್ ಮತ್ತು ಮಲೇಷಿಯಾ ತಂಡಗಳು ಸ್ಥಾನ ಪಡೆದಿವೆ. ತಲಾ ಗುಂಪಿನಲ್ಲಿ ಅಗ್ರಸ್ಥಾನ ಪಡೆಯುವ ಎರಡು ತಂಡಗಳು ಸೆಮಿಫೈನಲ್ಸ್ ಹಂತಕ್ಕೆ ಅರ್ಹತೆ ಪಡೆಯಲಿವೆ. ಜುಲೈ ೨೬ರಂದು ಈ ಪಂದ್ಯಗಳು ನಡೆಯಲಿವೆ. ಫೈನಲ್ ಪಂದ್ಯ ಇದೇ ೨೮ರಂದು ರಂಗಿರಿ ದಂಬುಲಾ ಅಂತಾರಾಷ್ಟ್ರೀಯ ಕ್ರಿಕೆಟ್ ಮೈದಾನದಲ್ಲಿ ಜರುಗಲಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**